**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

**O.S. No. 392/2024**

**ಸಾಕ್ಷಿಯನ್ನು ದಿನಾಂಕಃ 29.08.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಬಿ.ವಿ.ಎಸ್. / ಶ್ರೀ. ಎಂ.ಎನ್.ಆರ್. ವಕೀಲರಿಂದಃ**

ಈ ದಾವೆಯಲ್ಲಿ ನಾನು **ವಾದಿಯಾಗಿರುತ್ತೇನೆ.** ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಪ್ರತಿವಾದಿಗಳು ಬರೆದುಕೊಟ್ಟ ಅನ್ ಡಿಮ್ಯಾಂಡ್ ಪ್ರೋನೋಟ್ ಅನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–1** ಎಂದು, ನಾನು ಪ್ರತಿವಾದಿಗಳಿಗೆ ನನ್ನ ವಕೀಲರ ಮೂಲಕ ಕಳುಹಿಸಿದ ನೋಟೀಸ್ ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.–2** ಎಂದು, 02 ಅಂಚೆ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ **ನಿ.ಪಿ.–3** ಮತ್ತು **ನಿ.ಪಿ.–4** ಎಂದು, 02 ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು **ನಿ.ಪಿ.–5** ಮತ್ತು **ನಿ.ಪಿ.–6** ಎಂದು ಗುರುತಿಸಲಾಯಿತು.

**ಪಾಟಿ ಸವಾಲು: ಪ್ರತಿವಾದಿಗಳ ಪರ ವಕೀಲರು ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿರುತ್ತಾರೆ, ಸಮಯಾವಕಾಶ ನೀಡಲಾಯಿತು.**

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**

**ಹೆಗ್ಗಡದೇವನಕೋಟೆ.**